# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:05.04.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ವೆಂಕಟೇಶ್ (ಕಾರ್ಯಪಾಲಕ ಅಭಿಯಂತರರು, ಟಿವಿಸಿಸಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ವೆಂಕಟೇಶ್ | ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು |
| 3 | ಡಾ॥ ಚೇತನ್ | ವೈದ್ಯಾಧಿಕಾರಿಗಳು |
| 4 | ಶ್ರೀ ರಮೇಶ್ | ಹಿ. ಆ. ಪ. |
| 5 | ಶ್ರೀ ಸೋಮಶೇಖರ್ ಎಸ್. | ಕಿ. ಆ. ಪ. |
| 6 | ಶ್ರೀ ರಾಜಶೇಖರ್ | ಬೆಸ್ಕಾಂ |
| 7 | ಶ್ರೀ ರಂಗರಾಜು | ಬೆಸ್ಕಾಂ |
| 8 | ಶ್ರೀ ಅವಿನಾಶ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 9 | ಶ್ರೀ ಆಶೀರ್ವಾದ | 17/ಬಿ, ಮೇಲ್ವಿಚಾರಕರು |
| 10 | ಶ್ರೀ ಎಂ. ಸಿ. ವಿಲ್ಸನ್ | ಮೇಲ್ವಿಚಾರಕರು |
| 11 | ಶ್ರೀ ವೆಂಕಟೇಶ್ | ಮೇಲ್ವಿಚಾರಕರು |
| 12 | ಬಸವರಾಜು | ವಾರ್ಡ್-17/ಸಿ ಮೇಲ್ವಿಚಾರಕರು |
| 13 | ಶ್ರೀ ಮುರಳಿ | ಮೇಲ್ವಿಚಾರಕರು |
| 14 | ನಾಗೇಗೌಡ | ಮೇಲ್ವಿಚಾರಕರು |
| 15 | ಅಲಿಸ್ಟರ್ | ಮೇಲ್ವಿಚಾರಕರು |
| 16 | ರಾಜು | ಮಾರ್ಷಲ್ |
| 17 | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

### 1) ಘನತ್ಯಾಜ್ಯ ನಿರ್ವಹಣೆ :

ವಾರ್ಡ್-17ರಲ್ಲಿ ಪ್ರಸ್ತುತ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರಿಗೆ ಮುಖಗವಸು, ಕೈಗವಸು ಮತ್ತು ಪೊರಕೆಗಳನ್ನು ಒದಗಿಸುತ್ತಿಲ್ಲವೆಂದು ಕಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಲ್ಲಿ ಸಭೆಯಲ್ಲಿ ತಿಳಿಸಿರುತ್ತಾರೆ. ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಸೂಕ್ತ ಕ್ರಮಕೈಗೊಳ್ಳಲು ಸೂಚಿಸುತ್ತೇನೆಂದು ಸಭೆಗೆ ತಿಳಿಸಿದರು.

Scanned with CamScanner

2. ಬಿಬಿಎಂಪಿ ಅರಣ್ಯ ಇಲಾಖೆ:

ಮತ್ತಿಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ಮುಂಭಾಗ ಕೆಲವೊಂದು ಹಳೆಯ ಮರಗಳಿದ್ದು, ಮರದ ರೆಂಬೆಗಳು ಒಣಗಿ ಹೋಗಿದ್ದು, ಆಸ್ಪತ್ರೆಗೆ ಬರುವ ಸಾರ್ವಜನಿಕರ ಮೇಲೆ ಬೀಳುವ ಸ್ಥಿತಿಯಲ್ಲಿರುತ್ತದೆ. ಇದರ ಬಗ್ಗೆ ವೈದ್ಯಾಧಿಕಾರಿಗಳು ಹಿಂದೆಯೇ ಸಭೆಯಲ್ಲಿ ದೂರು ನೀಡಿದ್ದರೂ ಅರಣ್ಯ ಇಲಾಖೆಯವರು ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲ. ಈ ಬಗ್ಗೆ ಅಧ್ಯಕ್ಷರು ಮಾತನಾಡಿ, ಮರದ ರೆಂಬೆಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಇವರಿಗೆ ದೂರವಾಣಿ ಮುಖೇನ ತಿಳಿಸಿದರು.

3) ಬೆಸ್ಕಾಂ ಇಲಾಖೆ:

ವಾರ್ಡ್-17ರ ವ್ಯಾಪ್ತಿಯಲ್ಲಿ ಇರುವ ರಾಮಕೃಷ್ಣ ಹೆಗಡೆ ಈಜುಕೊಳ ಹಾಗೂ ಜೆ ಪಿ ಪಾರ್ಕ್‌ನಲ್ಲಿರುವ ಸಂಗೀತ ಕಾರಂಜಿಯ ವಿದ್ಯುತ್ ಬಿಲ್ಲನ್ನು ಸುಮಾರು ತಿಂಗಳಿಂದ ಪಾವತಿ ಮಾಡಿರುವುದಿಲ್ಲ. ಈ ಕುರಿತು ಬೆಸ್ಕಾಂ ಇಲಾಖೆಯವರು ಸಭೆಗೆ ದೂರು ನೀಡಿದ್ದು, ಅಧ್ಯಕ್ಷರು ಮಾತನಾಡಿ, ಕಾರ್ಯಪಾಲಕ ಅಭಿಯಂತರರು, ಯೋಜನಾ ವಿಭಾಗ, ರಾ ರಾ ನಗರ ವಲಯ ರವರಲ್ಲಿ ಮಾತನಾಡಿ, ಕೂಡಲೇ ಬಿಲ್ಲನ್ನು ಪಾವತಿ ಮಾಡ್ಡಿಕೊಡಬೇಕೆಂದು ದೂರವಾಣಿ ಮುಖೇನ ತಿಳಿಸಿದರು.

4) ಪ್ರಾಥಮಿಕ ಆರೋಗ್ಯ ಕೇಂದ್ರ:

ವಾರ್ಡ್-17ರ ವ್ಯಾಪ್ತಿಯಲ್ಲಿ ಇರುವ ಮತ್ತೀಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ಗಂಟಲು ದ್ರವ ಸಂಗ್ರಹಕಾರರು (ಸ್ವ್ಯಾಬ್ ಕಲೆಕ್ಟರ್ಸ್) ಹಾಗೂ ಶುಶ್ರೂಷಕಿಯರಿಗೆ ಮಾಸ್ಕ್ ಮತ್ತು ಗ್ಲೌಸ್‌ಗಳ ಕೊರತೆ ಉಂಟಾಗಿರುತ್ತದೆ. ಈ ಕುರಿತು ವೈದ್ಯಾಧಿಕಾರಿಗಳು ಅಧ್ಯಕ್ಷರಿಗೆ ತಿಳಿಸಿರುತ್ತಾರೆ. ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸುತ್ತೇನೆಂದು ಸಭೆಗೆ ತಿಳಿಸಿದರು.

5) ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-

ಪ್ರಸ್ತಾಪಿತ ವಿಷಯದ ಬಗ್ಗೆ ಮಾರ್ಷಲ್‌ಗಳೊಂದಿಗೆ ಚರ್ಚಿಸಲಾಗಿದ್ದು, ಒಂದು ತಿಂಗಳ ಹಿಂದೆ ಬೆಂಗಳೂರಿನಲ್ಲಿ ಕೋವಿಡ್ ಪ್ರಕರಣಗಳು ಪ್ರತಿದಿನ 300 ರಂತೆ ಕಂಡುಬರುತ್ತಿದ್ದವು, ಪ್ರಸ್ತುತ ಬೆಂಗಳೂರಿನಲ್ಲಿ ಪ್ರತಿದಿನ ಸರಾಸರಿ 3000 ಆಸುಪಾಸಿನಲ್ಲಿ ಪ್ರಕರಣಗಳು ಕಂಡುಬರುತ್ತಿದ್ದು, ಈ ಕುರಿತು ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸುತ್ತೋಲೆ ಹೊರಡಿಸಿರುತ್ತದೆ. ಮಾರ್ಷಲ್‌ಗಳು ಅದರಂತೆ, ಕ್ರಮ ಕೈಗೊಂಡು ಮಾಸ್ಕ್ ಹಾಕದಿರುವ ಸಾರ್ವಜನಿಕರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

Scanned with CamScanner

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರಿಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಎನ್. ಜಿ. ಉಮೇಶ್)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

(ವೆಂಕಟೇಶ್)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17

Scanned with CamScanner